# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.**

ಸಂಖ್ಯೆ: BBMP/Addl.Dir/ JDNORTH/LP/0615/2012-13 ದಿನಾಂಕ: 27-04-2015

cc/09/2015 4/5/15 45-15

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 525, 157/1, 27, 28, 29, 30, ಸೊಣ್ಣೇನಹಳ್ಳಿ ಗ್ರಾಮ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 85, ಮಹದೇವಪುರ ವಲಯ, ಬೆಂಗಳೂರು, ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ **ಬಿಲ್ಡಿಂಗ್ – 2** ರಲ್ಲಿ ವಿಂಗ್ – ಹೆಚ್, ಜೆ, ಮತ್ತು ಐ ವಸತಿ ಉದ್ದೇಶದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0615/2012-13 ದಿನಾಂಕ: 29–05–2013

2) ತಮ್ಮ ಮನವಿ ಪತ್ರ ದಿನಾಂಕ: 21–01–2015

* * * * * * *

ಆಸ್ತಿ ಸಂಖ್ಯೆ. 525, 157/1, 27, 28, 29, 30, ಸೊಣ್ಣೇನಹಳ್ಳಿ ಗ್ರಾಮ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 85, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ **ಬಿಲ್ಡಿಂಗ್ – 1,** ವಿಂಗ್ – ಎ, ಬಿ, ಸಿ, ಡಿ, ಇ, ಎಫ್ ಮತ್ತು ಜಿ ರಲ್ಲಿ 2 ತಳ + ನೆಲ + ಮೆಲಿನ 10 ಅಂತಸ್ತುಗಳು, **ಬಿಲ್ಡಿಂಗ್ – 2,** ವಿಂಗ್ – ಹೆಚ್, ಐ, ಜೆ, ಕೆ, ಎಲ್, ಎಮ್ ಮತ್ತು ಎನ್ ರಲ್ಲಿ 2 ತಳ + ನೆಲ + ಮೇಲಿನ 14 ಅಂತಸ್ತುಗಳು, **ಬಿಲ್ಡಿಂಗ್ – 3,** ವಿಂಗ್ – ಓ, ಪಿ, ಕ್ಯೂ ಮತ್ತು ಆರ್ ರಲ್ಲಿ 2 ತಳ + ನೆಲ + ಮೇಲಿನ 13 ಅಂತಸ್ತುಗಳು, **ಬಿಲ್ಡಿಂಗ್ – 4,** ವಿಂಗ್ – ಎಸ್ ಮತ್ತು ಟಿ ರಲ್ಲಿ 2 ತಳ + ನೆಲ + ಮೇಲಿನ 13 ಅಂತಸ್ತುಗಳ ಒಟ್ಟು 1044 ಘಟಕಗಳುಳ್ಳ ವಸತಿ ಸಮುಚ್ಚಯ ಮತ್ತು **ಬಿಲ್ಡಿಂಗ್ – 5** ರಲ್ಲಿ ತಳ + ನೆಲ + ಮೇಲಿನ ಒಂದು ಅಂತಸ್ತಿನ ಕ್ಲಬ್‌ಹೌಸ್ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 29–05–2013 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 17–03–2015 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 2,80,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2015-16/Apr/ 0001 ದಿನಾಂಕ: 07–04–2015 ರಂದು ಸಂದಾಯ ಮಾಡಿರುವುದರಿಂದ, ಸದರಿ **ಬಿಲ್ಡಿಂಗ್ – 2** ರಲ್ಲಿ ವಿಂಗ್ – ಹೆಚ್, ಜೆ, ಮತ್ತು ಐ ವಸತಿ ಉದ್ದೇಶದ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
4. ಮಂಜೂರಾದ ನಕ್ಷೆಯಲ್ಲಿನ ಉಳಿದ ಬ್ಲಾಕ್‌ಗಳ ಕಾಮಗಾರಿಯನ್ನು ಪ್ರಾರಂಭಿಸಿ, ಸ್ತಂಭಗಳನ್ನು ಅಳವಡಿಸಿದ ನಂತರ ಸದರಿ ಬ್ಲಾಕ್‌ಗಳಿಗೆ ಪ್ರಾರಂಭಿಕ ಪ್ರಮಾಣಪತ್ರಕ್ಕಾಗಿ ಪ್ರತ್ಯೇಕವಾಗಿ ಮನವಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

27/4/15

**ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

27/4/15 27/04/15 27/4/15

ಗೆ,

ಮೆ:ಬ್ರಿಗೇಡ್ ಎಂಟರ್‌ಪ್ರೈಸಸ್ ಲಿ., ಜಿ.ಪಿ.ಎ.ದಾರರು
ಶ್ರೀ ವಿಜಯ ರಾಘವ ರೆಡ್ಡಿ ಮತ್ತು ಇತರರು, ಖಾತಾದಾರರು ರವರ ಪರವಾಗಿ,
# 525, 157/1, 27, 28, 29, 30, ಸೊಣ್ಣೇನಹಳ್ಳಿ ಗ್ರಾಮ,
ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 85,
ಮಹದೇವಪುರ ವಲಯ, ಬೆಂಗಳೂರು